A-PDF Merger DEMO : Purchase from www.A-PDF.com to remove the watermark

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶಿವಮೊಗ್ಗ ನಗರದಲ್ಲಿ ನಿರ್ಮಾಣಗೊಳ್ಳುತ್ತಿರುವ ಬಂಜಾರ ಭವನ ಕಾಮಗಾರಿಗೆ ಅನುದಾನ ಬಿಡುಗಡೆ ಕುರಿತು.

ಓದಲಾಗಿದೆ:- 1) ಸರ್ಕಾರಿ ಆದೇಶ ಸಂಖ್ಯೆ: ಸಕಇ 69 ಎಸ್‌ಎಲ್‌ಪಿ 2009, ದಿ:10.09.2009.
2) ಸರ್ಕಾರಿ ಆದೇಶ ಸಂಖ್ಯೆ: ಸಕಇ 141 ಪಕವಿ 2011, ದಿ:04.08.2011
3) ಪತ್ರ ಸಂಖ್ಯೆ: ಕತಾಅನಿ/ಎ2/ಬ.ಭ.ನಿ/ಅನಧಾ/2012-13/2290, ದಿನಾಂಕ:13.12.2012.

*****

**ಪ್ರಸ್ತಾವನೆ:**

ಮೇಲೆ ಓದಲಾದ(1)ರ ಆದೇಶದಲ್ಲಿ ಗುಲ್ಬರ್ಗಾ, ಬಿಜಾಪುರ, ಹಾವೇರಿ, ಚಿತ್ರದುರ್ಗ, ಶಿವಮೊಗ್ಗ ಈ ನಗರಗಳಲ್ಲಿ ಬಂಜಾರ ಭವನ ನಿರ್ಮಿಸಲು ತಲಾ ಭವನಕ್ಕೆ ರೂ.200.00 ಲಕ್ಷಗಳಂತೆ ರೂ.1000.00 ಲಕ್ಷಗಳನ್ನು ಆಯವ್ಯಯದಲ್ಲಿ ಒದಗಿಸಿ, ಅನುಷ್ಠಾನಕ್ಕಾಗಿ ವಿಧಿಸಿದ ಷರತ್ತುಗಳೊಂದಿಗೆ ಬಿಡುಗಡೆ ಮಾಡಿ ಆದೇಶಿಸಿದೆ.

ಮೇಲೆ ಓದಲಾದ(2)ರ ಆದೇಶದಲ್ಲಿ ಸಕಇ 69 ಎಸ್‌ಎಲ್‌ಪಿ 2009, ದಿ:10.09.2009 ರ ಆದೇಶವನ್ನು ಭಾಗಶಃ ಮಾರ್ಪಡಿಸಿ ಶಿವಮೊಗ್ಗದಲ್ಲಿ ನಿರ್ಮಿಸಲು ಉದ್ದೇಶಿಸಿರುವ ಜಿಲ್ಲಾ ಮಟ್ಟದ ಬಂಜಾರ ಭವನ ನಿರ್ಮಾಣಕ್ಕೆ ರೂ.214.50 ಲಕ್ಷಗಳ ವೆಚ್ಚದ (ನಿವೇಶನ ವೆಚ್ಚ ಹೊರತುಪಡಿಸಿ) ಅಂದಾಜು ಪಟ್ಟಿಗೆ ಆಡಳಿತಾತ್ಮಕ ಮಂಜೂರಾತಿ ನೀಡಲಾಗಿದೆ.

ಮೇಲೆ ಓದಲಾದ (3)ರ ಪತ್ರದಲ್ಲಿ ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮವು ಈಗಾಗಲೇ ಶಿವಮೊಗ್ಗ ನಗರದಲ್ಲಿ ನಿರ್ಮಾಣಗೊಳ್ಳುತ್ತಿರುವ ಬಂಜಾರ ಭವನ ಕಾಮಗಾರಿಯ ಒಟ್ಟು ಅಂದಾಜು ವೆಚ್ಚ ರೂ.214.50 ಲಕ್ಷಗಳಿಗೆ ಆಡಳಿತಾತ್ಮಕ ಮಂಜೂರಾತಿ ನೀಡಿದ್ದು, ರೂ.200.00 ಲಕ್ಷಗಳ ಅನುದಾನವನ್ನು ಜಿಲ್ಲಾಧಿಕಾರಿಗಳು, ಶಿವಮೊಗ್ಗ ಜಿಲ್ಲೆ, ಇವರಿಗೆ ಬಿಡುಗಡೆ ಮಾಡಲಾಗಿದೆ. ಉಳಿದ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸಿ, ಉಳಿದ ಅನುದಾನ ರೂ.14.50 ಲಕ್ಷಗಳನ್ನು ಬಿಡುಗಡೆ ಮಾಡುವಂತೆ ದಿ:28.11.2012ರಂದು ನಡೆದ 13ನೇ ನಿರ್ದೇಶಕರ ಮಂಡಳಿ ಸಭೆಯನ್ವಯ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಗಳು, ಶಿವಮೊಗ್ಗ ಜಿಲ್ಲೆ, ಇವರು ಕೋರಿದರನ್ವಯ ಸದರಿ ಅನುದಾನವನ್ನು ಬಿಡುಗಡೆ ಮಾಡುವಂತೆ ಪ್ರಸ್ತಾವನೆಯಲ್ಲಿ ಕೋರಿರುತ್ತಾರೆ.

ಅದರಂತೆ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ:ಸಕಇ 91 ಎಸ್‌ಡಿಸಿ 2013, ಬೆಂಗಳೂರು,**
**ದಿನಾಂಕ:01-07-2013,**

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ ಶಿವಮೊಗ್ಗ ನಗರದಲ್ಲಿ ನಿರ್ಮಾಣ ಗೊಳ್ಳುತ್ತಿರುವ ಬಂಜಾರ ಭವನದ ಉಳಿದ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸಲು ಉಳಿದ

...2

ಅನುದಾನ ರೂ.14.50( ಹದಿನಾಲ್ಕು ಲಕ್ಷದ ಐವತ್ತು ಸಾವಿರ ರೂಪಾಯಿಗಳು ಮಾತ್ರ)ಲಕ್ಷಗಳನ್ನು ಬಿಡುಗಡೆ ಮಾಡಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ವಿ.ರತ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಮಾಜ ಕಲ್ಯಾಣ ಇಲಾಖೆ.

ಗೆ,

1. ಮಹಾಲೇಖಪಾಲರು (ಎ ಮತ್ತು ಇ) (ಲೆಕ್ಕ ಪರಿಶೋಧನೆ-1) (ಲೆಕ್ಕ ಪರಿಶೋಧನೆ-2) ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
3. ಜಿಲ್ಲಾಧಿಕಾರಿಗಳು, ಶಿವಮೊಗ್ಗ ಜಿಲ್ಲೆ, ಶಿವಮೊಗ್ಗ.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು
5. ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್, ಶಿವಮೊಗ್ಗ ಜಿಲ್ಲೆ, ಶಿವಮೊಗ್ಗ.
6. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
7. ಕಾರ್ಯಪಾಲಕ ಅಭಿಯಂತರರು, ಶಿವಮೊಗ್ಗ ವಿಭಾಗ ಲೋಕೋಪಯೋಗಿ ಇಲಾಖೆ.
8. ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿಗಳು, ಶಿವಮೊಗ್ಗ ಜಿಲ್ಲೆ, ಶಿವಮೊಗ್ಗ.
9. ಸರ್ಕಾರದ ಪ್ರಧಾನ ಕಾರ್ಯದಶಿ, ಇವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ.
10. ಸರ್ಕಾರದ ಉಪ ಕಾರ್ಯದರ್ಶಿ-2, ಸಮಾಜ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರು
11. ಶಾಖಾ/ರಕ್ಷಾ ಕಡತ/ಹೆಚ್ಚುವರಿ ಪ್ರತಿ.